**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ .1349/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | - ಮೋಹನ್ ಕುಮಾರ ಗೌಡ | | **ಚಾ.ಸಾ.-2** |
| **ತಂದೆ/ಗಂಡನ ಹೆಸರು** | - ಪುಟ್ಟಸ್ವಾಮಿ | | **ಫ್ರಾ.ಸಾ.-6** |
| **ವಯಸ್ಸು** | - 37 ವರ್ಷ | | |
| **ಉದ್ಯೋಗ** | - ವ್ಯವಸಾಯ | | |
| **ವಾಸಸ್ಥಳ** | - ಚುಂಚಗಹಳ್ಳಿ | | |

ದಿನಾಂಕಃ 30-01-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ಚಾ.ಸಾ. 1, 3 ರವರ ನ ಮತ್ತು ಮೃತ ಪುಟ್ಟ ಸ್ವಾಮಿ ಪರಿಚಯವಿರುತ್ತದೆ. ಆರೋಪಿಯ ಪರಿಚಯವಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಗೊತ್ತಿಲ್ಲ, ನಾನು ಯಾವುದೇ ಅಪಘಾತ ನೋಡಿಲ್ಲ, ಗಾಯಾಳುವನ್ನು ಉಪಚರಿಸಿಲ್ಲ ಮತ್ತು ಚಿಕಿತ್ಸೆ ಕೊಡಿಸಿಲ್ಲ. ನಾನು ಅಪಘಾತದ ವಿಚಾರವನ್ನು ಯಾರಿಗೂ ಮಾಹಿತಿ ನೀಡಿಲ್ಲ ಮತ್ತು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ ಸಾಕ್ಷಿ ನಿಪಿ-3 ಮತ್ತು 4 ದಾಖಲೆಗಳನ್ನು ನೋಡಿ ಗುರುತಿಸಿದ್ದು ಅದರಲ್ಲಿರುವ ಸಾಕ್ಷಿಯ ಸಹಿಗಳನ್ನು ನಿ.ಪಿ. 3 ಬಿ ಮತ್ತು 4 ಸಿ ಎಂದು ಗುರುತಿಸಲಾಯಿತು. ಸದರಿ ದಾಖಲೆ ಸುಮಾರು 2 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಪೊಲೀಸ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಸದರಿ ದಾಖಲೆಗಳಿಗೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆಂದರೆ ಸರಿಯಲ್ಲ. ನಮ್ಮ ಸಮಕ್ಷಮ ಯಾವುದೇ ವಾಹನವನ್ನು ಅಮಾನತ್ತುಪಡಿಸಿಕೊಂಡಿಲ್ಲ ಮತ್ತು ಯಾವುದೇ ನಕ್ಷೆಯನ್ನು ತಯಾರಿಸಿಲ್ಲ.

**( ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿ ನೀಡಲಾಯಿತು. )**

**ಪಾಟೀ ಸವಾಲುಃ ಮಾನ್ಯ ಎ ಪಿ ಪಿ ರವರಿಂದ**

ದಿಃ 15-07-2023 ರಂದು ಸಂಜೆ 04-00 ಸಮಯದಲ್ಲಿ ನೀವು ಹೋಗುತ್ತಿದ್ದಾಗ ಕೆಎ-11 ಇ ಕ್ಯೂ 5705 ಬೈಕ್ ನ್ನು ನಿಮ್ಮ ಮುಂದೆ ಪುಟ್ಟಸ್ವಾಮಿರವರು ಚಾಲನೆ ಮಾಡಿಕೊಂಡು ಕೆ ಬೆಳ್ಳೂರು ಕಡೆಗೆ ಹೋಗುತ್ತಿದ್ದರು ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ಎದುರುಗಡೆಯಿಂದ ಕೆಎ-11 ಸಿ 1824 ಟಾಟಾ ಏಸ್ ಗೂಡ್ಸ್ ವಾಹನದ ಚಾಲಕ ತನ್ನ ಬಾಬ್ತು ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಹೊನ್ನಲಗೆರೆ ಗ್ರಾಮದ ಪ್ರಕಾಶ್ ರವರ ಇಟ್ಟಿಗೆ ಫ್ಯಾಕ್ಟರಿ ನೇರದಲ್ಲಿ ಡಿ ಹೊಸೂರು ಗೇಟ್ ಹತ್ತಿರ ಪುಟ್ಟಸ್ವಾಮಿ ಹೋಗುತ್ತಿದ್ದ ಬೈಕ್ ಗೆ ಡಿಕ್ಕಿಪಡಿಸಿ ಅಪಘಾತಪಡಿಸಿದನು ಎಂದರೆ ಸರಿಯಲ್ಲ. ಸದರಿ ಅಪಘಾತದಿಂದ ಪುಟ್ಟಸ್ವಾಮಿ ಬೈಕ್ ಸಮೇತ ರಸ್ತೆ ಮೇಲೆ ಬಿದ್ದು ತಲೆ, ಎದೆ, ಹೊಟ್ಟೆ ಹಾಗೂ ದೇಹದ ಇತರ ಕಡೆ ಪೆಟ್ಟಾಗಿ ರಕ್ತಗಾಯಂಟಾಗಿತ್ತು ಎಂದರೆ ಸರಿಯಲ್ಲ. ನಂತರ ನೀವು ಗಾಯಾಳುವನ್ನು ಉಪಚರಿಸಿ ನೀವು ಮತ್ತು ಸದರಿ ಅಪಘಾತಪಡಿಸಿದ ಚಾಲಕ ರಸ್ತೆಯಲ್ಲಿ ಬರುತ್ತಿದ್ದ ವಾಹನದಲ್ಲಿ ಗಾಯಾಳುವನ್ನು ಚಿಕಿತ್ಸೆಗಾಗಿ ಮದ್ದೂರು ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತೀರೀ ಎಂದರೆ ಸರಿಯಲ್ಲ. ನಂತರ ಅಪಘಾತಪಡಿಸಿದ ವಾಹನ ಚಾಲಕ ಹೆಸರು ಚೆನ್ನಪ್ಪ ಬಿನ್ ನಾಗರಾಜು, ಬ್ಯಾಡರಹಳ್ಳಿ ಗ್ರಾಮ ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ-1 ರವರಿಗೆ ಅಪಘಾತದ ಬಗ್ಗೆ ಮಾಹಿತಿ ನೀಡಿದ್ದು ಅದರಂತೆ ಚಾಸಾ-1 ರವರು ಗಾಯಾಳುವಿಗೆ ಮದ್ದೂರು ಸರಕಾರಿ ಆಸ್ಪತ್ರೆಗೆ ಪ್ರಥಮ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮಂಡ್ಯ ಜಿಲ್ಲಾ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಒಳರೋಗಿಯಾಗಿ ದಾಖಲಿಸಿ ಚಿಕಿತ್ಸೆ ಕೊಡಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಸಂಜೆ 07-05 ಗಂಟೆ ಸಮಯದಲ್ಲಿ ಗಾಯಾಳು ಪುಟ್ಟಸ್ವಾಮಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಗಾಯಾಳು ಪುಟ್ಟಸ್ವಾಮಿರವರ ಸಾವಿಗೆ ಆರೋಪಿಯು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಡಿಕ್ಕಿಪಡಿಸಿದ್ದರಿಂದ ಅವರು ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ನಂತರ ದಿಃ 16-07-2023 ರಂದು ಬೆಳಗ್ಗೆ 10-00 ರಿಂದ 11.00 ಗಂಟೆಯವರೆಗೆ ನೀವು ತೋರಿಸಿದ ಕೃತ್ಯ ನಡೆದ ಸ್ಥಳದಲ್ಲಿ ಚಾ.ಸಾ. 9 ಮತ್ತು 10 ರವರ ಸಮಕ್ಷಮ ನಿ.ಪಿ. 3 ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆಂದರೆ ಸರಿಯಲ್ಲ. ನಂತರ ಮಧ್ಯಾಹ್ನ 01-00 ರಿಂದ 01-50 ಗಂಟೆ ಸಮಯದಲ್ಲಿ ಪೊಲೀಸ್ ಠಾಣಾ ಆವರಣದಲ್ಲಿ ನಿಮ್ಮ ಹಾಗೂ ಚಾಸಾ-11 ಮತ್ತು 12 ರವರ ಸಮಕ್ಷಮ ಅಪಪಘಾತಕ್ಕೀಡಾದ ಕೆಎ-11 ಇಕ್ಯೂ 5705 ಬೈಕ್ ಮತ್ತು ಅಪಘಾತಪಡಿಸಿದ ಕೆಎ-11 ಸಿ-1824 ವಾಹನವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ದಿಃ 16-07-2023 ರಂದು ಈ ಬಗ್ಗೆ

ಪೊಲೀಸರಿಗೆ ನೀವು ಹೇಳಿಕೆಯನ್ನು ನೀಡಿರುತ್ತೀರಿ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ಸಾಕ್ಷಿಯು ಒಪ್ಪದ ಕಾರಣ, ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ನಿಪಿ-5 ರಲ್ಲಿರುವ ವಿಚಾರಗಳು ನಿಮಗೆ ಎಲ್ಲಾ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ವಕೀಲರಿಂದ ಏನೂ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ನ್ಯಾಯಾಧೀಶರು

ಸಾಕ್ಷಿ ಸಹಿ ಮತ್ತು ಜೆ ಎಂ ಎಫ್ ಸಿ , ಮದ್ದೂರು.